ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ರಾಜ್ಯದಲ್ಲಿ ಗ್ರಾಮೀಣ ಆರೋಗ್ಯ ಅಭಿಯಾನದಡಿ (NRHM) ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಕುರಿತು

ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

1008 (1219) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯಕ್ಕೆ ರಾಷ್ಟ್ರೀಯ ಗ್ರಾಮೀಣ ಆರೋಗ್ಯ (NRHM) ಅಭಿಯಾನದಡಿ ಪ್ರಾರಂಭವಾದ ವರ್ಷದಿಂದ ಅಂದರೆ 2013-14ರ ಸಾಲಿನಿಂದ ಇಲ್ಲಿಯವರೆಗೆ ವಿವಿಧ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; (ಪೂರ್ಣ ಮಾಹಿತಿ ನೀಡುವುದು)

(ಆ) ಈ ರೀತಿ ಬಿಡುಗಡೆಯಾದ ಅನುದಾನದಲ್ಲಿ ಜಿಲ್ಲಾವಾರು ತಾಲ್ಲೂಕುವಾರು ವಿವಿಧ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದಡಿ ಇದುವರೆವಿಗೂ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರ ಸ್ಥಾಪನೆಯಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಯಡಿ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳನ್ನು ದುರಸ್ತಿ ಮಾಡಲಾಗಿದೆಯೇ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದೆಯೇ; ರಾಜ್ಯ ಸರ್ಕಾರವಾಗಲಿ ಅಥವಾ ಕೇಂದ್ರ ಸರ್ಕಾರದಿಂದ ಅಧ್ಯಯನ ನಡೆಸಲಾಗಿದೆಯೇ; ನಡೆಸಿದ್ದಲ್ಲಿ, ಅಧ್ಯಯನ ವರದಿಯ ಮುಖ್ಯಾಂಶಗಳೇನು?